**File No. AGRI-AAE/30/2019-AGRI_PLAN_B-AGRICULTURE Secretariat**

**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** 2019-20ನೇ ಸಾಲಿನಲ್ಲಿ ಮುಂಗಾರು ಮತ್ತು ಹಿಂಗಾರು ಹಂಗಾಮುಗಳಿಗೆ ಮರುವಿನ್ಯಾಸಗೊಳಿಸಲಾದ ಹವಾಮಾನ ಆಧಾರಿತ ಬಿಮಾ (ವಿಮಾ) ಯೋಜನೆಯನ್ನು ಅನುಷ್ಠಾನಗೊಳಿಸಲು ಕೃಷಿ ಇಲಾಖೆಯಿಂದ ಅನುದಾನ ಬಿಡುಗಡೆಗೊಳಿಸುವ ಬಗ್ಗೆ.

**ಓದಲಾಗಿದೆ.** ಆಯುಕ್ತರು, ಕೃಷಿ ಇಲಾಖೆ ಇವರ ಪತ್ರ ಸಂ: ಜಕೃನಿ (ಬೆವಿ)/ಅನುದಾನ ಬಿಡುಗಡೆ/3/2019-20, ದಿ:27.05.2019 ಮತ್ತು ದಿ:07.08.2019.

**ಪ್ರಸ್ತಾವನೆ :**

ರಾಜ್ಯದಲ್ಲಿ ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆಯನ್ನು (KRS-PMFBY) ಅನುಷ್ಠಾನಗೊಳಿಸಲು ಕೃಷಿ ಇಲಾಖೆಯು ನೋಡಲ್ ಇಲಾಖೆಯಾಗಿರುತ್ತದೆ. ತೋಟಗಾರಿಕೆ ಇಲಾಖೆಯಿಂದ R-WBICS ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದ್ದು, ವಿಮೆ ಸಂಸ್ಥೆಗಳ ಆಯ್ಕೆ ಕುರಿತಂತೆ ಟೆಂಡರ್ ಪ್ರಕ್ರಿಯೆಯು ಸಹ ಅನುಷ್ಠಾನದ ಒಂದು ಭಾಗವಾಗಿರುತ್ತದೆ. ಇದಲ್ಲದೇ, ಬಿಡ್ ದಾಖಲಾತಿಗಳನ್ನು ಮತ್ತು ಅದಕ್ಕೆ ಸಂಬಂಧಿಸಿದ ಎಲ್ಲಾ ವರದಿಗಳನ್ನು ತೋಟಗಾರಿಕೆ ಇಲಾಖೆಯಿಂದಲೇ ತಯಾರಿಸಲಾಗಿರುತ್ತದೆ. ಆದ್ದರಿಂದ, ತೋಟಗಾರಿಕೆ ಇಲಾಖೆಯ ಹಂತದಲ್ಲಿ ಟೆಂಡರ್ ಮುಖಾಂತರ ಆಯ್ಕೆಯಾದ ಅನುಷ್ಠಾನ ಬೆಳೆ ವಿಮೆ ಸಂಸ್ಥೆಗಳಿಗೆ ನೀಡಬೇಕಾದ ರಾಜ್ಯದ ಪಾಲಿನ ವಿಮಾಕಂತಿನ ರಿಯಾಯತಿ ಮೊತ್ತವನ್ನು R-WBCIS ಯೋಜನೆಯಡಿ ನೋಂದಣಿ ಪ್ರಗತಿಗನುಗುಣವಾಗಿ ಮತ್ತು ತೋಟಗಾರಿಕೆ ಇಲಾಖೆಯ ಬೇಡಿಕೆಯಂತೆ ಕೃಷಿ ಇಲಾಖೆಯಿಂದ ಬಿಡುಗಡೆ ಮಾಡಬೇಕಾಗಿರುತ್ತದೆ. ತೋಟಗಾರಿಕೆ ಇಲಾಖೆಯ ಬೇಡಿಕೆಯಂತೆ ಕೃಷಿ ಇಲಾಖೆಯು ಲೆಕ್ಕ ಶಿರ್ಷಿಕೆ 2401-00-110-0-07 ಉಪ ಶಿರ್ಷಿಕೆ 059, 106, 422 ಮತ್ತು 423 ರಡಿ ಒದಗಿಸಿರುವ ಅನುದಾನದಿಂದ ತೋಟಗಾರಿಕೆ ಇಲಾಖೆಯ ಡಿಡಿಓ ಕೋಡ್‌ಗೆ ಅನುದಾನ Upload ಮಾಡಬೇಕಾಗಿರುತ್ತದೆ. ಈ ಹಿನ್ನೆಲೆಯಲ್ಲಿ 2019-20ನೇ ಸಾಲಿನಲ್ಲಿ ಮುಂಗಾರು ಮತ್ತು ಹಿಂಗಾರು ಹಂಗಾಮಿಗೆ ಮರುವಿನ್ಯಾಸಗೊಳಿಸಲಾದ ಹವಾಮಾನ ಆಧಾರಿತ ಬಿಮಾ (ವಿಮಾ) ಯೋಜನೆಯ ಬೇಡಿಕೆಯನ್ವಯ ಸದರಿ ಲೆಕ್ಕ ಶಿರ್ಷಿಕೆಯಡಿ ಅನುದಾನದ ಲಭ್ಯತೆಗನುಗುಣವಾಗಿ ತೋಟಗಾರಿಕೆ ಇಲಾಖೆಗೆ ಅನುದಾನವನ್ನು ಬಿಡುಗಡೆ ಮಾಡಲು ಅನುಮತಿಯನ್ನು ನೀಡುವಂತೆ ಆಯುಕ್ತರು, ಕೃಷಿ ಇಲಾಖೆ ಇವರು ಮೇಲೆ ಓದಲಾದ ಪತ್ರದಲ್ಲಿ ಕೋರಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ; ಕೃಇ 30 ಕೃಕೈಲು 2019, ಬೆಂಗಳೂರು, ದಿನಾಂಕ: 06.09.2019**

2019-20ನೇ ಸಾಲಿನಲ್ಲಿ ಮುಂಗಾರು ಮತ್ತು ಹಿಂಗಾರು ಹಂಗಾಮುಗಳಿಗೆ ಮರು ವಿನ್ಯಾಸಗೊಳಿಸಲಾದ ಹವಾಮಾನ ಆಧಾರಿತ ಬಿಮಾ (ವಿಮಾ) ಯೋಜನೆಯನ್ನು (R-WBCIS) ಅನುಷ್ಠಾನಗೊಳಿಸಲು ಅನುವಾಗುವಂತೆ ಅನುಷ್ಠಾನ ಬೆಳೆ ವಿಮೆ ಸಂಸ್ಥೆಗಳಿಗೆ ನೀಡಬೇಕಾದ ರಾಜ್ಯದ ಪಾಲಿನ ವಿಮಾಕಂತಿನ ರಿಯಾಯತಿ

ಮೊತ್ತವನ್ನು R-WBCIS ಯೋಜನೆಯಡಿ ನೋಂದಣಿ ಪ್ರಗತಿಗನುಗುಣವಾಗಿ ಹಾಗೂ ತೋಟಗಾರಿಕೆ ಇಲಾಖೆಯ ಬೇಡಿಕೆಯಂತೆ ಆಯವ್ಯಯ ಲೆಕ್ಕಶೀರ್ಷಿಕೆ: 2401-00-110-0-07 ಉಪ ಶೀರ್ಷಿಕೆ 059, 106, 422 ಮತ್ತು 423 ಯಡಿ ಒದಗಿಸಿರುವ ಅನುದಾನದ ಲಭ್ಯತೆಗನುಗುಣವಾಗಿ ತೋಟಗಾರಿಕೆ ಇಲಾಖೆಗೆ (ಡಿಡಿಓ ಕೋಡ್‌ಗೆ) ಬಿಡುಗಡೆ ಮಾಡಲು ಸರ್ಕಾರದ ಅನುಮತಿಯನ್ನು ನೀಡಲಾಗಿದೆ.

ಈ ಆದೇಶವನ್ನು ಆಂತರಿಕ ಆರ್ಥಿಕ ಸಲಹೆಗಾರರ ಟಿಪ್ಪಣಿ ಸಂಖ್ಯೆ: ಕೃಇ 08 ಆಂಆಸ 2019, ದಿನಾಂಕ:30-08-2019 ರಲ್ಲಿ ನೀಡಿರುವ ಸಹಮತಿ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ

ಮತ್ತು ಅವರ ಹೆಸರಿನಲ್ಲಿ

B S Nagarathnam

(ಬಿ.ಎಸ್.ನಾಗರತ್ನಮ್ಮ)

ಸರ್ಕಾರದ ಅಧೀನ ಕಾರ್ಯದರ್ಶಿ,

ಕೃಷಿ ಇಲಾಖೆ (ಯೋಜನೆ)

06/09/19

ಇವರಿಗೆ:-

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್ ಎಸ್ ಎ) / (ಇ & ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು-01.
2. ಪ್ರಧಾನ ಮಹಾಲೇಖಪಾಲರು (A&E), ಕರ್ನಾಟಕ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
4. ಕೃಷಿ ಆಯುಕ್ತರು / ಕೃಷಿ ನಿರ್ದೇಶಕರು, ಶೇಷಾದ್ರಿ ರಸ್ತೆ, ಬೆಂಗಳೂರು.
5. ನಿರ್ದೇಶಕರು, ತೋಟಗಾರಿಕೆ ಇಲಾಖೆ, ಲಾಲ್‌ಬಾಗ್, ಬೆಂಗಳೂರು.
6. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
7. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
8. ನಿರ್ದೇಶಕರು, TNMC, ಖನಿಜ ಭವನ ಬೆಂಗಳೂರು.
9. ಸರ್ಕಾರದ ಉಪ ಕಾರ್ಯದರ್ಶಿ, ತೋಟಗಾರಿಕೆ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
10. ಆಂತರಿಕ ಆರ್ಥಿಕ ಸಲಹೆಗಾರರು ಕೃಷಿ ಮತ್ತು ತೋಟಗಾರಿಕೆ ಇಲಾಖೆ, ಬೆಂಗಳೂರು
11. ಶಾಖೆಯ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

*****